# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಸಿ ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | : | 1054 (1190) |
| ಉತ್ತರಿಸಬೇಕಾದ ದಿನಾಂಕ | : | 13.03.2026 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಜಲ ಜೀವನ್ ಮಿಷನ್ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಮಂಜೂರಾಗಿರುವ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಪೂರ್ಣಗೊಂಡಿರುವ ಮತ್ತು ಇನ್ನು ಪ್ರಾರಂಭವಾಗಲು ಬಾಕಿ ಇರುವ ಕಾಮಗಾರಿಗಳೆಷ್ಟು; | ಜಲ ಜೀವನ್ ಮಿಷನ್ ಯೋಜನೆಗಳನ್ನು ರಾಜ್ಯದಲ್ಲಿ ಏಕಗ್ರಾಮ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ಕಳೆದ ಮೂರು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ವಿವರ ಈ ಕೆಳಕಂಡಂತಿದೆ; (ಕೆಳಗಿನ ಕೋಷ್ಟಕ ನೋಡಿ) |

| ಕ್ರ. ಸಂ | ವಿವರ | ಮೈಸೂರು | | ಚಾಮರಾಜನಗರ | |
|---|---|---|---|---|---|
| | | SVS | MVS | SVS | MVS |
| 1 | ಒಟ್ಟು ಕಾಮಗಾರಿ ಗಳು | 1042 | 14 | 1226 | 2 |
| 2 | ಭೌತಿಕವಾಗಿ ಪೂರ್ಣ ಗೊಂಡಿರುವ ಕಾಮಗಾರಿಗಳ ಸಂಖ್ಯೆ | 959 | 13 | 1024 | - |
| 3 | ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ | 83 | 0 | 198 | 2 |
| 4 | ಪ್ರಾರಂಭಿಸಲು ಬಾಕಿ ಉಳಿದಿರುವ ಕಾಮಗಾರಿಗಳ ಸಂಖ್ಯೆ | 0 | 1 | 4 | 0 |

ಮೈಸೂರು ಜಿಲ್ಲೆಯ ಬಾಕಿ ಇರುವ 01 MVS ಪ್ರಸ್ತುತ ಟೆಂಡರ್ ಪ್ರಕ್ರಿಯೆ ಹಂತದಲ್ಲಿರುತ್ತದೆ ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ ಬಾಕಿ ಇರುವ 04 SVS ಕಾಮಗಾರಿಗಳು ಅರಣ್ಯ ಇಲಾಖೆ ಅನುಮತಿ ಪಡೆಯುವ ಹಂತದಲ್ಲಿರುತ್ತದೆ.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಈ ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬ ಮಾಡುತ್ತಿರುವ ಗುತ್ತಿಗೆದಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಕಪ್ಪುಪಟ್ಟಿಗೆ (Black List) ಸೇರಿಸಲಾದ ಅಥವಾ ದಂಡ ವಿಧಿಸಲಾದ ಗುತ್ತಿಗೆದಾರರ ವಿವರಗಳನ್ನು ಒದಗಿಸುವುದು; | ಜಲ ಜೀವನ್ ಮಿಷನ್ ಯೋಜನೆಯಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಾಮಗಾರಿಗಳ ಅನುಷ್ಠಾನದಲ್ಲಿ ಗುತ್ತಿಗೆದಾರರಿಂದ ವಿಳಂಬವಾದ ಸಂಧರ್ಭಗಳಲ್ಲಿ ನಿಯಮಾನುಸಾರ ದಂಡವಿಧಿಸಿ ಕಾಲಾವಧಿ ವಿಸ್ತರಣೆ ಅನುಮೋದಿಸಲು ಕ್ರಮವಹಿಸಲಾಗುತ್ತಿದೆ. ಉಭಯ ಜಿಲ್ಲೆಗಳಲ್ಲಿ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ (Black List) ಸೇರಿಸಲಾದ ಪ್ರಕರಣಗಳು ಇರುವುದಿಲ್ಲ. |

ಇ) ಈ ಎರಡು ಜಿಲ್ಲೆಗಳಲ್ಲಿ ಯೋಜನೆಗಳಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ಮತ್ತು ಈವರೆಗೆ ಬಳಕೆಯಾಗಿರುವ ಮೊತ್ತವೆಷ್ಟು;

ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನದ ವಿವರ ಇಂತಿದೆ;

**(ರೂ.ಲಕ್ಷಗಳಲ್ಲಿ)**

| ಕ್ರ. ಸಂ | ಜಿಲ್ಲೆ | ಕೇಂದ್ರ ಸರ್ಕಾರ | | ರಾಜ್ಯ ಸರ್ಕಾರ | |
|---|---|---|---|---|---|
| | | ಬಿಡುಗಡೆ ಯಾದ ಅನುದಾನ | ವೆಚ್ಚ | ಬಿಡುಗಡೆ ಯಾದ ಅನುದಾನ | ವೆಚ್ಚ |
| 1 | ಚಾಮರಾಜ ನಗರ | 13,316.70 | 12,580.01 | 18,429.32 | 17,100.88 |
| 2 | ಮೈಸೂರು | 58,336.67 | 57,850.43 | 88,681.21 | 88,144.56 |
| | **ಒಟ್ಟು** | **71,653.37** | **70,430.44** | **1,07,110.53** | **1,05,245.44** |

ಈ) ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಈಗಾಗಲೇ ಗುತ್ತಿಗೆದಾರರಿಗೆ ಪಾವತಿಸಬೇಕಾದ ಬಾಕಿ ಹಣ (pending bills) ಎಷ್ಟು; ಬಾಕಿ ಹಣ ಪಾವಸತಿಸದ ಕಾರಣ ಹಲವು ಕಡೆ ನೀರು ಸರಬರಾಜು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಮೈಸೂರು ಜಿಲ್ಲೆ ವ್ಯಾಪ್ತಿಯಲ್ಲಿ ಭೌತಿಕವಾಗಿ ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಒಟ್ಟು 1622.38 ಲಕ್ಷಗಳ ಬಿಲ್ ಪಾವತಿ ಬಾಕಿಯಿರುತ್ತದೆ.

ಚಾಮರಾಜನಗರ ಜಿಲ್ಲೆ ವ್ಯಾಪ್ತಿಯಲ್ಲಿ ಭೌತಿಕವಾಗಿ ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಒಟ್ಟು 688.85 ಲಕ್ಷಗಳ ಬಿಲ್ ಪಾವತಿ ಬಾಕಿಯಿರುತ್ತದೆ.

ರಾಜ್ಯ ಸರ್ಕಾರದಿಂದ ಭೌತಿಕವಾಗಿ ಪೂರ್ಣಗೊಂಡಿರುವ ಕಾಮಗಾರಿಗಳ ಬಾಕಿ ಬಿಲ್ ಗಳನ್ನು ಆದ್ಯತೆ ಮೇಲೆ ಪಾವತಿಸಲು ಕ್ರಮವಹಿಸಲಾಗುತ್ತಿದೆ.

ಉಭಯ ಜಿಲ್ಲೆಗಳಲ್ಲಿ ಭೌತಿಕವಾಗಿ ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಗುತ್ತಿಗೆದಾರರಿಗೆ ಬಾಕಿ ಬಿಲ್ ಪಾವತಿಯಾಗದೇ ಇರುವುದರಿಂದ ನೀರು ಸರಬರಾಜು ಸ್ಥಗಿತಗೊಂಡಿರುವುದಿಲ್ಲ.

ಗ್ರಾಕುನೀ&ನೈಇ/ಮುಇಂ/ತಾಂತ್ರಿಕ/ 152 /2025-26

**(ಪ್ರಿಯಾಂಕ್ ಖರ್ಗೆ)**,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.